**All India Radio: Bangalore**
**National Bulletin In Kannada**
**27.05.2026  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**27.05.2026  1.10 p.m.**

**<><><><>**

ಮುಖ್ಯಾಂಶಗಳು

1. ಶದ ಹಲವೆಡೆ ತಾಪಮಾನ ಹೆಚ್ಚಳ ಹಿನ್ನೆಲೆ; ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಜನತೆಗೆ ಪ್ರಧಾನಿ ನರೇಂದ್ರ ಮೋದಿ ಕರೆ
2. ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ದಿನಗಣನೆ ಆರಂಭ; 'ವಯೋಸಹಜ ಆರೋಗ್ಯಕ್ಕೆ ಯೋಗ'– ಈ ವರ್ಷದ ಘೋಷವಾಕ್ಯ
3. ಕೇಂದ್ರ ಚುನಾವಣಾ ಆಯೋಗ ಕೈಗೊಂಡಿರುವ ವಿಶೇಷ ಮತಪಟ್ಟಿ ಪರಿಷ್ಕರಣೆ ಸಿಂಧುತ್ವವನ್ನು ಎತ್ತಿಹಿಡಿದ ಸುಪ್ರೀಂಕೋರ್ಟ್
4. ದೇಶದಲ್ಲಿ ಈವರೆಗೆ ಎಬೊಲಾ ವೈರಾಣು ಸೋಂಕು ಪ್ರಕರಣ ದೃಢಪಟ್ಟಿಲ್ಲ- ಆರೋಗ್ಯ ಸಚಿವಾಲಯ ಸ್ಪಷ್ಟನೆ
5. ಐಪಿಎಲ್ ಟಿ-೨೦ ಕ್ರಿಕೆಟ್; .ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿಂದು ಸನ್ ರೈಸರ್ಸ್ ಹೈದರಾಬಾದ್ - ರಾಜಸ್ಥಾನ ರಾಯಲ್ಸ್ ಮುಖಾಮುಖಿ

<><><><>

ದೇಶದ ಹಲವೆಡೆ ತಾಪಮಾನ ಹೆಚ್ಚಳ ಹಿನ್ನೆಲೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಜನತೆಗೆ ಎಲ್ಲಾ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಕರೆ ನೀಡಿದ್ದಾರೆ. ಅವರು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ಮನೆಯಿಂದ ಹೊರಗೆ ಹೋಗಬೇಕಾದರೆ, ಸಾಧ್ಯವಾದಷ್ಟು ಕುಡಿಯುವ ನೀರು ಕೊಂಡೊಯ್ಯುವಂತೆ ಸಲಹೆ ನೀಡಿದ್ದಾರೆ. ಅಲ್ಲದೆ, ಬಿಸಿಲಿನಿಂದ ದೈನಂದಿನ ಜೀವನದ ಮೇಲೆ ಉಂಟಾಗುವ ಪರಿಣಾಮಗಳನ್ನು ತಗ್ಗಿಸಲು ಎಲ್ಲಾ ರೀತಿಯ ಕ್ರಮಗಳನ್ನು ಕೈಗೊಳ್ಳಬೇಕು. ಬಾಯಾರಿದವರಿಗೆ ಕುಡಿಯುವ ನೀರು ನೀಡಬೇಕು. ಸೂರ್ಯನ ಶಾಖಕ್ಕೆ ಮೈಯೊಡ್ಡುವಂತಹ ಕೆಲಸ ಮಾಡುವವರು ಸಾಕಷ್ಟು ನೀರು ಕುಡಿಯುವ ಮೂಲಕ ತಮ್ಮ ದೇಹ ಸ್ಥಿತಿಯನ್ನು ಕಾಯ್ದುಕೊಳ್ಳಬೇಕು ಎಂದು ಅವರು ಹೇಳಿದ್ದರೆ. ಇಷ್ಟೇ ಅಲ್ಲದೆ, ಜನರು, ಪ್ರಾಣಿ,

ಪಕ್ಷಿಗಳನ್ನು ಗಮನದಲ್ಲಿರಿಸಿಕೊಂಡು ತಮ್ಮ ಮನೆಯ ಹೊರಗೆ ಮೇಲ್ಛಾವಣಿಗಳಲ್ಲಿ ಸಣ್ಣ ಪಾತ್ರೆಗಳಲ್ಲಿ ನೀರನ್ನು ಇಡುವಂತೆ ಸೂಚಿಸಿದ್ದಾರೆ. ಬಿಸಿಲಿನ ತಾಪಮಾನ ಹೆಚ್ಚುತ್ತಿರುವುದರಿಂದ ಪ್ರತಿಯೊಬ್ಬರು ಸಾಧ್ಯವಾದಷ್ಟು ಮನೆಯೊಳಗೆ ಇರಬೇಕು ಹಾಗೂ ಹೆಚ್ಚು ಹೆಚ್ಚು ನೀರು ಸೇವಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ.

<><><>

ದೆಹಲಿಯಲ್ಲಿ ಗರಿಷ್ಠ ಉಷ್ಣಾಂಶ ೪೩ ರಿಂದ ೪೫ ಡಿಗ್ರಿ ಸೆಲ್ಸಿಯಸ್ ಏರಿಕೆಯಾಗಿದ್ದು, ಇಲ್ಲಿ ಭಾರತೀಯ ಹವಾಮಾನ ಇಲಾಖೆ ಬಿಸಿಗಾಳಿಯ ಯೆಲ್ಲೋ ಅಲರ್ಟ್ ಘೋಷಿಸಿದೆ. ಅಲ್ಲದೆ, ಹರಿಯಾಣ, ಚಂಡೀಗಢ, ಮಧ್ಯಪ್ರದೇಶ, ಪಂಜಾಬ್, ರಾಜಸ್ಥಾನ, ಉತ್ತರ ಪ್ರದೇಶ, ವಿದರ್ಭಗಳಲ್ಲೂ ಬಿಸಿಗಾಳಿ ಬೀಸುವ ಸಾಧ್ಯತೆಯಿದೆ ಎಂದು ಐಎಂಡಿ ಮುನ್ಸೂಚನೆ ನೀಡಿದೆ.

<><><>

೨೦೨೬ರ ಅಂತಾರಾಷ್ಟ್ರೀಯ ಯೋಗ ದಿನಾಚರಣೆಗೆ ದಿನಗಣನೆ ಆರಂಭವಾಗಿದ್ದು, ಈ ವರ್ಷದ ಘೋಷವಾಕ್ಯ 'ವಯೋಸಹಜ ಆರೋಗ್ಯಕ್ಕಾಗಿ ಯೋಗ' ಎಂಬುದಾಗಿದೆ. ಅಂತಾರಾಷ್ಟ್ರೀಯ ಯೋಗ ದಿನದ ಅಂಗವಾಗಿ ಖಜುರಹೋದಲ್ಲಿಂದು ನಡೆದ ಪೂರ್ವಭಾವಿ ಯೋಗ ಮಹೋತ್ಸವ ಕಾರ್ಯಕ್ರಮದಲ್ಲಿ ಕೇಂದ್ರ ಆಯುಷ್ ಸಚಿವ ಪ್ರತಾಪ್ ರಾವ್ ಜಾದವ್ ಭಾಗವಹಿಸಿದ್ದರು. ಈ ವೇಳೆ ಅವರು, ವಯೋಸಹಜ ಸಮಯದಲ್ಲಿ ದೈಹಿಕ ಸದೃಢತೆ ಕಾಯ್ದುಕೊಳ್ಳಲು ನಿಯಮಿತವಾಗಿ ಯೋಗಾಭ್ಯಾಸವನ್ನು ರೂಡಿಸಿಕೊಳ್ಳುವ ಆಗತ್ಯವಿದೆ. ನಮ್ಮ ಭಾರತೀಯ ಸಾಂಸ್ಕೃತಿ ಮತ್ತು ಆದ್ಯಾತ್ಮಿಕ ಪರಂಪರೆಯ ಅವಿಭಾಜ್ಯ ಅಂಗವಾಗಿರುವ ಯೋಗ, ಜಾಗತಿಕ ಚಳವಳಿಯಾಗಿ ರೂಪುಗೊಂಡಿದೆ. ೨೦೧೪ರಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಮನವಿಯಂತೆ ವಿಶ್ವಸಂಸ್ಥೆ ಜೂನ್ ೨೧ನ್ನು ಅಂತಾರಾಷ್ಟ್ರೀಯ ಯೋಗ ದಿನವೆಂದು ಘೋಷಿಸಿತು. ಈ ವರ್ಷದ ಯೋಗ ದಿನದ ಪ್ರಧಾನ ಕಾರ್ಯಕ್ರಮ ಕೊಲ್ಕತ್ತಾದಲ್ಲಿ ನಡೆಯಲಿದೆ ಎಂದು ಆಯುಷ್ ಸಚಿವ ಪ್ರತಾಪ್ ರಾವ್ ಜಾದವ್ ತಿಳಿಸಿದ್ದಾರೆ.

<><><>

ಕೇಂದ್ರ ಚುನಾವಣಾ ಆಯೋಗ ಕೈಗೊಂಡಿರುವ ವಿಶೇಷ ಮತಪಟ್ಟಿ ಪರಿಷ್ಕರಣೆ-ಎಸ್ಐಆರ್ ಸಿಂಧುತ್ವವನ್ನು ಸುಪ್ರೀಂಕೋರ್ಟ್ ಎತ್ತಿಹಿಡಿದಿದೆ. ಎಸ್ಐಆರ್ ಪ್ರಶ್ನಿಸಿ ಸಲ್ಲಿಸಿದ್ದ ಹಲವು ಅರ್ಜಿಗಳ ಕುರಿತು ಸುದೀರ್ಘ ವಾದ-ಪ್ರತಿವಾದ ಆಲಿಸಿದ ನಂತರ ಕಾಯ್ದಿರಿಸಿದ್ದ ತೀರ್ಪನ್ನು ಮುಖ್ಯ

ನ್ಯಾಯಮೂರ್ತಿ ಸೂರ್ಯಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ ಮಲ್ಯ ಬಾಗ್ಚಿ ಅವರಿದ್ದ ನ್ಯಾಯಪೀಠ ಪ್ರಕಟಿಸಿದೆ. ನ್ಯಾಯ ಹಾಗೂ ಮುಕ್ತ ಚುನಾವಣೆಗಳನ್ನು ನಡೆಸಲು ಆಯೋಗ, ತನಗೆ ಸಾಂವಿಧಾನಿಕವಾಗಿ ಲಭ್ಯವಿರುವ ಅಧಿಕಾರವನ್ನು ಬಳಸಿ, ಮತದಾರರ ಪಟ್ಟಿ ಪರಿಷ್ಕರಣೆಯನ್ನು ಕೈಗೊಂಡಿರುವುದು ಸರಿಯಿದೆ. ಪರಿಷ್ಕರಣೆ ಕಾರ್ಯ ಕೈಗೊಳ್ಳಲು ಆಯೋಗಕ್ಕೆ ಎಲ್ಲಾ ರೀತಿಯ ಅಧಿಕಾರವಿದ್ದು, ಎಸ್‌ಐಆರ್ ನಿಂದ ಯಾವುದೇ ಕಾನೂನು ಉಲ್ಲಂಘನೆಯಾಗಿಲ್ಲ ಎಂದು ನ್ಯಾಯಾಲಯ ಆದೇಶಿಸಿದೆ. ಚುನಾವಣಾ ಆಯೋಗ ಸಂವಿಧಾನದ ೩೨೬ನೇ ಕಲಂ ಅಡಿ ಲಭ್ಯವಿರುವ ಅಧಿಕಾರವನ್ನು ಬಳಸಿ ಹಾಗೂ ಪ್ರಜಾಪ್ರತಿನಿಧಿ ಕಾಯ್ದೆ-೧೯೫೦ ಮತ್ತು ಅದರಡಿ ರೂಪಿಸಲಾಗಿರುವ ನಿಯಮಗಳ ಅನ್ವಯ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಕಾರ್ಯ - ಎಸ್‌ಐಆರ್ ಅನ್ನು ಅರ್ಜಿದಾರರು ಪ್ರಶ್ನಿಸಿದ್ದರು.

<><><><>

ದೇಶದಲ್ಲಿ ಈವರೆಗೆ ಯಾವುದೇ ಎಬೊಲಾ ವೈರಾಣು ಸೋಂಕು ಪ್ರಕರಣ ವರದಿಯಾಗಿಲ್ಲ ಎಂದು ಕೇಂದ್ರ ಸರ್ಕಾರ ಸ್ಪಷ್ಟಪಡಿಸಿದೆ. ಕೇಂದ್ರ ಆರೋಗ್ಯ ಸಚಿವಾಲಯ ಇತ್ತೀಚೆಗೆ ಆಫ್ರಿಕಾದ ಕೆಲವು ರಾಷ್ಟ್ರಗಳಲ್ಲಿ ಎಬೊಲಾ ಸೋಂಕು ಪತ್ತೆಯಾಗಿರುವ ಹಿನ್ನೆಲೆಯಲ್ಲಿ ಆ ಕುರಿತು ನಿಕಟ ನಿಗಾ ಇಡಲಾಗಿದೆ ಎಂದು ಸರ್ಕಾರ ತಿಳಿಸಿದೆ. ಇತ್ತೀಚೆಗೆ ಉಗಾಂಡ, ಆಫ್ರಿಕಾ ರಾಷ್ಟ್ರಗಳ ಪ್ರವಾಸ ಕೈಗೊಂಡವರಲ್ಲಿ ಮೈಕೈ ನೋವು ಮತ್ತಿತರ ಲಕ್ಷಣಗಳು ಕಂಡುಬಂದಿದ್ದವು, ಅವರನ್ನು ಬೆಂಗಳೂರಿನ ಆಸ್ಪತ್ರೆಯಲ್ಲಿ ತೀವ್ರ ನಿಗಾದಲ್ಲಿ ಇಟ್ಟು ಪರೀಕ್ಷೆಗೆ ಒಳಪಡಿಸಲಾಗಿತ್ತು. ಅವರ ರಕ್ತದ ಮಾದರಿಯನ್ನು ಸಂಗ್ರಹಿಸಿ, ರಾಷ್ಟ್ರೀಯ ವೈರಾಣು ಸಂಸ್ಥೆಯ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಆ ವರದಿಯಲ್ಲಿ ಎಬೋಲಾ ಸೋಂಕು ಪತ್ತೆಯಾಗಿಲ್ಲ ಎಂದು ಆರೋಗ್ಯ ಸಚಿವಾಲಯ ತಿಳಿಸಿದೆ. ಆದರೂ ಸಹ ಎಲ್ಲಾ ರಾಜ್ಯಗಳಿಗೆ ವಿಶ್ವ ಆರೋಗ್ಯ ಸಂಸ್ಥೆಯ ಮಾರ್ಗಸೂಚಿಯಂತೆ ಎಲ್ಲಾ ಅಗತ್ಯ ಸಾರ್ವಜನಿಕ ಆರೋಗ್ಯ ಶಿಷ್ಟಾಚಾರ ಹಾಗೂ ಮುನ್ನೆಚ್ಚರಿಕೆ ಕ್ರಮಗಳನ್ನು ಪಾಲಿಸುವಂತೆ ಸೂಚನೆ ನೀಡಲಾಗಿದೆ ಎಂದು ಆರೋಗ್ಯ ಸಚಿವಾಲಯ ಹೇಳಿದೆ.

<><><><>

ಒಳನುಸುಳುವಿಕೆ ಮತ್ತು ಇನ್ನಿತರ ಕಾರಣಗಳಿಂದಾಗಿ ಜನಸಂಖ್ಯೆಯ ಮೇಲೆ ಆಗುತ್ತಿರುವ ಪರಿಣಾಮಗಳ ಬಗ್ಗೆ ಅಧ್ಯಯನ ನಡೆಸಲು ಕೇಂದ್ರ ಸರ್ಕಾರ ಉನ್ನತಮಟ್ಟದ ಸಮಿತಿಯನ್ನು ರಚಿಸಿದೆ. ಈ ಕುರಿತು ತಮ್ಮ ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ ವಿವರ ನೀಡಿರುವ ಕೇಂದ್ರ

ಗೃಹ ಸಚಿವ ಅಮಿತ್ ಶಾ, ಸುಪ್ರೀಂಕೋರ್ಟ್‌ನ ನಿವೃತ್ತ ನ್ಯಾಯಮೂರ್ತಿ ಪಿ.ಪಿ.ನಾಲೇಖ ಅವರ ಅಧ್ಯಕ್ಷತೆಯಲ್ಲಿ ಸಮಿತಿ ರಚಿಸಲಾಗಿದ್ದು, ಅದರಲ್ಲಿ ಗಣತಿ ಆಯುಕ್ತರು ಹಾಗೂ ಮಾಜಿ ಐಎಎಸ್ ಅಧಿಕಾರಿ ದುರ್ಗಾ ಶಂಕರ್ ಮಿಶ್ರಾ, ಐಪಿಎಸ್ ಅಧಿಕಾರಿ ಬಾಲ ಶ್ರೀವಾತ್ಸವ, ಆರ್ಥಿಕ ತಜ್ಞರಾದ ಡಾ.ಶಮಿಕಾ ರವಿ ಅವರನ್ನು ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ಎಂದು ತಿಳಿಸಿದ್ದಾರೆ. ಒಳನುಸುಳುವಿಕೆ ಮತ್ತು ಇತರ ಕಾರಣಗಳಿಂದಾಗಿ ಜನಸಂಖ್ಯೆಯ ಮೇಲೆ ವ್ಯಾಪಕ ಪರಿಣಾಮಗಳಾಗುತ್ತಿದ್ದು, ಇದು ದೇಶಕ್ಕೆ ಪ್ರಸ್ತುತ ಮತ್ತು ಭವಿಷ್ಯದ ಅತಿದೊಡ್ಡ ಸವಾಲಾಗಿದೆ. ಜನಸಂಖ್ಯೆಯ ಬದಲಾವಣೆ ವಿಚಾರ ಕೇವಲ ಸಾರ್ವಭೌಮತ್ವಕ್ಕೆ ಸಂಬಂಧಿಸಿದ್ದು ಮಾತ್ರವಲ್ಲ, ರಾಷ್ಟ್ರೀಯ ಭದ್ರತೆ, ಕಾನೂನು ಸುವ್ಯವಸ್ಥೆ ಹಾಗೂ ಸಾಮಾಜಿಕ ವ್ಯವಸ್ಥೆಯ ಬದಲಾವಣೆ ಮತ್ತು ಬುಡಕಟ್ಟು ಸಮಾಜಗಳ ಸಂರಕ್ಷಣೆಯೂ ಒಳಗೊಂಡಿದೆ ಎಂದು ಅಮಿತ್ ಶಾ ಹೇಳಿದ್ದಾರೆ.

<><><>

ಇಂದು ದೇಶದ ಮೊದಲ ಪ್ರಧಾನಿ, ದಿವಂಗತ ಪಂಡಿತ್ ಜವಾಹರ್ ಲಾಲ್ ನೆಹರು ಅವರ ಪುಣ್ಯ ಸ್ಮರಣೆ. ಅದರ ಅಂಗವಾಗಿ ದೇಶಾದ್ಯಂತ ಅವರನ್ನು ಸ್ಮರಿಸಲಾಗುತ್ತಿದೆ. ಪ್ರಧಾನಿ ನರೇಂದ್ರ ಮೋದಿ ಅವರು, ಪಂಡಿತ್ ಜವಹರ್ ಲಾಲ್ ನೆಹರು ಅವರಿಗೆ ಗೌರವ ನಮನ ಸಲ್ಲಿಸಿದ್ದಾರೆ. ದೆಹಲಿಯ ಶಾಂತಿವನದಲ್ಲಿ ನಡೆದ ೬೨ನೇ ಪುಣ್ಯಸ್ಮರಣೆಯಲ್ಲಿ ಲೋಕಸಭೆಯ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ, ರಾಜ್ಯಸಭೆಯ ನಾಯಕ ಹಾಗೂ ಅಖಿಲ ಭಾರತ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮತ್ತಿತರರು ನೆಹರು ಅವರ ಸ್ಮಾರಕಕ್ಕೆ ಪುಷ್ಪನಮನ ಸಲ್ಲಿಸಿದರು.

<><><>

ಉತ್ತರ ಪತ್ರಿಕೆಗಳ ಮೌಲ್ಯಮಾಪನದಲ್ಲಿ ಬಳಸಲಾದ ಆನ್‌ಸ್ಕ್ರೀನ್ ಮಾರ್ಕಿಂಗ್ ಪದ್ಧತಿಯಲ್ಲಿ ಯಾವುದೇ ಭದ್ರತಾ ಲೋಪವಾಗಿಲ್ಲ ಎಂದು ಕೇಂದ್ರ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ-ಸಿಬಿಎಸ್‌ಇ ಸ್ಪಷ್ಟಪಡಿಸಿದೆ. ಸಾಮಾಜಿಕ ಮಾಧ್ಯಮಗಳಲ್ಲಿ ಉತ್ತರ ಪತ್ರಿಕೆಗಳ ಮೌಲ್ಯಮಾಪನದ ಬಗ್ಗೆ ಹಲವು ಅಂಶಗಳು ಪ್ರಸ್ತಾಪವಾದ ಹಿನ್ನೆಲೆಯಲ್ಲಿ ಸಿಬಿಎಸ್‌ಸಿ ಈ ಸ್ಪಷ್ಟನೆ ನೀಡಿದ್ದು, ಸದೃಢ ಕುಂದುಕೊರತೆ ನಿವಾರಣಾ ವ್ಯವಸ್ಥೆಯೊಂದಿಗೆ ಮೌಲ್ಯಮಾಪನದಲ್ಲಿ ಪಾರದರ್ಶಕತೆ ಹೆಚ್ಚಿಸಲು ಹೊಸ ಪದ್ಧತಿಯನ್ನು ಅನುಸರಿಸಲಾಗಿದೆ. ಈ ಪ್ರಕ್ರಿಯೆಯಲ್ಲಿ ದಕ್ಷತೆ ಹಾಗೂ ಎಲ್ಲಾ ಭದ್ರತಾ ಕ್ರಮಗಳನ್ನು ಖಾತರಿಪಡಿಸಲಾಗಿದೆ ಎಂದು ಸಿಬಿಎಸ್‌ಇ ತಿಳಿಸಿದೆ.

<><><>

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಕೆನಡಾದ ತಮ್ಮ ಸಹವರ್ತಿ ಮಣಿಂದರ್ ಸಿದು ಅವರೊಂದಿಗೆ 'ಕೆನಡಾ-ಭಾರತ ಹೂಡಿಕೆ ದುಂಡುಮೇಜಿನ ಸಭೆ'ಯ ಸಹ ಅಧ್ಯಕ್ಷತೆಯನ್ನು ವಹಿಸಿದ್ದರು. ಈ ವೇಳೆ ಮಾತನಾಡಿದ ಪಿಯೂಷ್ ಗೋಯಲ್, ಕೆನಡಾದ ಮುಂಚೂಣಿ ಪಿಂಚಣಿ ನಿಧಿ ಹಾಗೂ ಸಾಂಸ್ಥಿಕ ಹೂಡಿಕೆದಾರರು ಮತ್ತು ಕೆನಡಾ- ಭಾರತ ವಾಣಿಜ್ಯ ಮಂಡಳಿಯ ಸದಸ್ಯರು, ಪಾಲುದಾರರೊಂದಿಗೆ ವಿಸ್ತೃತ ಮಾತುಕತೆ ನಡೆಸಲಾಯಿತು ಎಂದು ಹೇಳಿದರು.

<><><><>

ನ್ಯೂ ಚಂಡೀಗಢದ ಮೊಹಾಲಿಯಲ್ಲಿ ಇಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್‌ನ ಎರಡನೇ ಕ್ವಾಲಿಫೈಯರ್ ಪಂದ್ಯದಲ್ಲಿ ಸನ್ ರೈಸರ್ಸ್ ಹೈದರಾಬಾದ್ ಮತ್ತು ರಾಜಸ್ಥಾನ ರಾಯಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ ಕ್ಕೆ ಆರಂಭವಾಗಲಿದೆ. ಹಿಮಾಚಲ ಪ್ರದೇಶದ ಧರ್ಮಶಾಲ ಕ್ರೀಡಾಂಗಣದಲ್ಲಿ ನಿನ್ನೆ ರಾತ್ರಿ ನಡೆದ ಮೊದಲ ಕ್ವಾಲಿಫೈಯರ್ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು, ಗುಜರಾತ್ ಟೈಟನ್ಸ್ ವಿರುದ್ಧ ಗೆಲುವು ಸಾಧಿಸಿ, ಸತತ ಎರಡನೇ ಬಾರಿಗೆ ಫೈನಲ್ ತಲುಪಿದೆ.

<><><><>

ಸಿಂಗಾಪುರ್ ಓಪನ್ ಬ್ಯಾಡ್ಮಿಂಟನ್ ಟೂರ್ನಿಯಲ್ಲಿ ಭಾರತದ ಪಿ.ವಿಸಿಂಧೂ, ಪುರುಷರ ಡಬಲ್ಸ್ ಜೋಡಿ, ಸಾತ್ವಿಕ್ ಸಾಯಿರಾಜ್ ರಾಂಕಿರೆಡ್ಡಿ ಮತ್ತು ಚಿರಾಗ್ ಶೆಟ್ಟಿ ಪ್ರೀ ಕ್ವಾರ್ಟರ್ ಫೈನಲ್ ಪ್ರವೇಶಿಸಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>